ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 673 ಗ್ರಾಪಂಅ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:19-09-2019

ಸುತ್ತೋಲೆ

**ವಿಷಯ:** ಗ್ರಾಮ ಸಭೆಗಳಲ್ಲಿ ಕೇಂದ್ರ ಸರ್ಕಾರದ ಪ್ರಮುಖ ಅಭಿಯಾನಗಳಾದ 'ಫಿಟ್ ಇಂಡಿಯಾ', 'ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ' ಮತ್ತು 'ಪೋಶನ್ ಮಹಾ' (ಪೌಷ್ಟಿಕ ಆಹಾರದ ಮಹತ್ವದ) ಗಳ ಬಗ್ಗೆ ಚರ್ಚಿಸುವ ಮೂಲಕ ಜನಸಾಮಾನ್ಯರಲ್ಲಿ ಅರಿವು ಮೂಡಿಸುವ ಬಗ್ಗೆ.

**ಉಲ್ಲೇಖ:**
1. ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯದ ಪತ್ರ ಸಂಖ್ಯೆ:D.O. No. M-11015/210/2019-FD ದಿನಾಂಕ:22-08-2019, 06-09-2019 ಮತ್ತು 16-09-2019.
2. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 673 ಗ್ರಾಪಂಅ 2019 ದಿನಾಂಕ:26-08-2019.

*******

ಭಾರತ ಸರ್ಕಾರವು ನಾಗರೀಕರ ಉತ್ತಮ ಆರೋಗ್ಯಕ್ಕಾಗಿ ದೇಹದಾರ್ಢ್ಯತೆ, ಪೌಷ್ಟಿಕತೆ ಹಾಗೂ ಪರಿಸರವನ್ನು ಸಂರಕ್ಷಿಸುವುದು ಅನಿವಾರ್ಯ ಕ್ರಮವಾಗಿರುವುದರಿಂದ ರಾಷ್ಟ್ರಾದ್ಯಾಂತ ಅಭಿಯಾನಗಳ ಮೂಲಕ ಜನಸಾಮಾನ್ಯರಿಗೆ ತಿಳುವಳಿಕೆ ಮೂಡಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಭಾರತ ಸರ್ಕಾರವು ಉಲ್ಲೇಖಿತ ಪತ್ರಗಳಲ್ಲಿ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಿರುತ್ತದೆ.

'ಫಿಟ್ ಇಂಡಿಯಾ' ಅಭಿಯಾನವನ್ನು ಹಮ್ಮಿಕೊಳ್ಳುವುದರ ಬಗ್ಗೆ ಉಲ್ಲೇಖ (2) ರಲ್ಲಿನ ಸುತ್ತೋಲೆಯಲ್ಲಿ ಎಲ್ಲಾ ಗ್ರಾಮ ಪಂಚಾಯತಿ / ತಾಲ್ಲೂಕು ಪಂಚಾಯತಿ / ಜಿಲ್ಲಾ ಪಂಚಾಯತಿಗಳಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ತರಬೇತಿ ಸಂಸ್ಥೆ ಹಾಗೂ ಗ್ರಾಮೀಣ ವಿಶ್ವವಿದ್ಯಾನಿಲಯಗಳಿಗೆ ಸೂಚಿಸಲಾಗಿದೆ.

ಗ್ರಾಮೀಣ ಪ್ರದೇಶಗಳನ್ನು ಪ್ಲಾಸ್ಟಿಕ್ ಮುಕ್ತ ಪ್ರದೇಶಗಳನ್ನಾಗಿ ಪರಿವರ್ತಿಸಲು ಈಗಾಗಲೇ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದರೂ, ನಿರೀಕ್ಷಿತ ಮಟ್ಟದ ಪರಿಣಾಮ ಕಂಡು ಬರುತ್ತಿಲ್ಲ. ಈ ಕಾರಣದಿಂದ ಭಾರತ ಸರ್ಕಾರವು "PLASTIC WASTE FREE CAMPAIGN- SHS 2019" ಅಭಿಯಾನವನ್ನು ಎಲ್ಲಾ ಗ್ರಾಮ ಪಂಚಾಯತಿಗಳು ಸೆಪ್ಟೆಂಬರ್ ಮತ್ತು ಅಕ್ಟೋಬರ್ ತಿಂಗಳುಗಳಲ್ಲಿ ಆಚರಿಸುವಂತೆ ನಿರ್ದೇಶನ ನೀಡಿರುತ್ತದೆ. ಆದುದರಿಂದ ಗ್ರಾಮ ಪಂಚಾಯತಿಗಳು ಈ ಸಂಬಂಧವಾಗಿ ಗ್ರಾಮ ಸಭೆಗಳ ಕಾರ್ಯಸೂಚಿಯಲ್ಲಿ ಈ ವಿಷಯವನ್ನು ಒಂದು ಪ್ರಮುಖ ಅಂಶವನ್ನಾಗಿ ಪರಿಗಣಿಸಬೇಕು ಹಾಗೂ ಕಡಿಮೆ ಗುಣಮಟ್ಟದ ಪ್ಲಾಸ್ಟಿಕ್‌ನ್ನು ಬಳಸದಂತೆ ಜನಸಾಮಾನ್ಯರಲ್ಲಿ ಅರಿವು ಮೂಡಿಸಬೇಕು. ಮುಂದುವರೆದು, ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸಂಗ್ರಹವಾಗುವ ಪ್ಲಾಸ್ಟಿಕ್ ತ್ಯಾಜ್ಯವನ್ನು ಮರುಬಳಕೆಗಾಗಿ ಪರಿವರ್ತಿಸುವ ಘಟಕಗಳಿಗೆ ಸ್ಥಳಾಂತರಿಸಲು ಗ್ರಾಮ ಪಂಚಾಯತಿಗಳಿಗೆ ಸೂಚಿಸಲಾಗಿದೆ. ಈ ಸಂಬಂಧವಾಗಿ ಪ್ರತಿಯೊಂದು ಗ್ರಾಮ ಪಂಚಾಯತಿಯು ಅಥವಾ ಗ್ರಾಮ ಪಂಚಾಯತಿಗಳು ಒಟ್ಟಾಗಿ ಘಟಕಗಳನ್ನು ಸ್ಥಾಪಿಸಿಕೊಳ್ಳಲು ಕ್ರಮವಹಿಸುವಂತೆ ಸೂಚಿಸಲಾಗಿದೆ. ಗ್ರಾಮ ಪಂಚಾಯತಿ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರುಗಳು ಸ್ವಯಂ ಪ್ರೇರಿತರಾಗಿ ಈ ವಿಷಯದ ಬಗ್ಗೆ ಗ್ರಾಮ ಸಭೆಗಳಲ್ಲಿ ಹಾಗೂ ಇನ್ನಿತರೆ ಸಾರ್ವಜನಿಕ ಸಭೆಗಳಲ್ಲಿ ಜನಸಾಮಾನ್ಯರಿಗೆ ಅರಿವು ಮೂಡಿಸಬೇಕೆಂದು ಸೂಚಿಸಲಾಗಿದೆ. ಈ ಕಾರ್ಯಕ್ರಮಗಳನ್ನು ಆಯೋಜಿಸಿರುವುದನ್ನು ಕೇಂದ್ರ ಸರ್ಕಾರಕ್ಕೆ ಮನವರಿಕೆ ಮಾಡಿಕೊಳ್ಳಲು ಅನುವಾಗುವಂತೆ, Google Play Store ನಲ್ಲಿ ಲಭ್ಯವಾಗುವ PLASTIC WASTE FREE CAMPAIGN- SHS 2019" ಆ್ಯಪ್‌ನ್ನು ಮೊಬೈಲಿಗೆ ಡೌನ್‌ಲೋಡ್ ಮಾಡಿಕೊಂಡು ಮಾಹಿತಿಯನ್ನು ಅಳವಡಿಸುವಂತೆ ಸೂಚಿಸಲಾಗಿದೆ.

'ಫಿಟ್ ಇಂಡಿಯಾ' ಅಭಿಯಾನದಲ್ಲಿ ಗ್ರಾಮೀಣ ಮಟ್ಟದ ಮಕ್ಕಳು, ಯುವಕರು ಹಾಗೂ ವಯಸ್ಕರುಗಳಿಗೆ ಆರೋಗ್ಯಕರವಾದ ಆಹಾರ ಮತ್ತು ಸದೃಢ ದೇಹದ ಆರೋಗ್ಯ ಬಗ್ಗೆ ಹೆಚ್ಚಿನ ಅರಿವನ್ನು ಮೂಡಿಸುವ ವಿಷಯವನ್ನು ಗ್ರಾಮ ಸಭೆಗಳಲ್ಲಿ ಒಂದು ಪ್ರಮುಖ ಕಾರ್ಯಸೂಚಿಯನ್ನಾಗಿ ಗುರುತಿಸಿಕೊಳ್ಳುವಂತೆ ತಿಳಿಸಲಾಗಿದೆ. ಉತ್ತಮ ಆಹಾರ ಸೇವನೆಯಿಂದ ಅತ್ಯುತ್ತಮ ಆರೋಗ್ಯವನ್ನು ಪಡೆದುಕೊಳ್ಳುವ ಬಗ್ಗೆ ಶಾಲೆಗಳಲ್ಲಿ, ಸಂಘ-ಸಂಸ್ಥೆಗಳಲ್ಲಿ ಹಾಗೂ ಸ್ಥಳೀಯ ಸ್ವ-ಸಹಾಯ ಸಂಘಗಳ ಮುಖಾಂತರ ಜನ ಸಾಮಾನ್ಯರಲ್ಲಿ ತಿಳುವಳಿಕೆ ಮೂಡಿಸಬೇಕು. ಈ ನಿಟ್ಟಿನಲ್ಲಿ ಗ್ರಾಮೀಣ ಕ್ರೀಡಾ ಕೂಟಗಳನ್ನು ಆಯೋಜಿಸಲು ಹಾಗೂ ಸ್ಥಳೀಯ ಜನತೆ ಪಾಲ್ಗೊಳ್ಳುವಂತೆ ಕಾರ್ಯ ಕ್ರಮಗಳನ್ನು ರೂಪಿಸುವಂತೆ ತಿಳಿಸಲಾಗಿದೆ.

'ಪೋಶನ್ ಮಹಾ' (ಪೌಷ್ಟಿಕ ಆಹಾರ ಮಾಸಿಕ) ಗಳ ವಿಷಯಗಳನ್ನು ಗ್ರಾಮ ಪಂಚಾಯತಿಗಳು ಆಯೋಜಿಸುವ ಗ್ರಾಮ ಸಭೆಗಳಲ್ಲಿ ಒಂದು ಪ್ರಮುಖ ಕಾರ್ಯಸೂಚಿಯನ್ನಾಗಿ ಅಳವಡಿಸಿಕೊಂಡು ಈ ವಿಷಯದ ಬಗ್ಗೆ ಗ್ರಾಮಸ್ಥರಲ್ಲಿ ಅರಿವು ಮೂಡಿಸಬೇಕು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಹಯೋಗದೊಡನೆ ಪ್ರತಿ ಗ್ರಾಮಗಳಲ್ಲಿ ಈ ಬಗ್ಗೆ ಜನಾಂದೋಲನಾ ಕಾರ್ಯಕ್ರಮವನ್ನು ಏರ್ಪಡಿಸುವುದರ ಜೊತೆಗೆ ಸ್ಥಳೀಯ ಮಾಧ್ಯಮಗಳಲ್ಲಿ ಹೆಚ್ಚಿನ ಪ್ರಚಾರಕ್ಕೆ ಒತ್ತುಕೊಡಬೇಕು. ಪೋಶಕಾಂಶಗಳ ಬಳಕೆಯ ಬಗ್ಗೆ ಗ್ರಾಮ ಬೀದಿಗಳಲ್ಲಿ ಮಕ್ಕಳ ಮತ್ತು ಮಹಿಳೆಯರ ಪಥ ಸಂಚಲನ ನಡೆಸುವುದು. ಈ ಎಲ್ಲಾ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿರುವ ಬಗ್ಗೆ Jan Andolan Dashboard ನಲ್ಲಿ ಅಳವಡಿಸಲು ಕ್ರಮ ಕೈಗೊಳ್ಳುವುದು.

ಕೇಂದ್ರ ಸರ್ಕಾರವು ಈ ಅಭಿಯಾನಗಳ ಉದ್ದೇಶ ಹಾಗೂ ಔಚಿತ್ಯಗಳ ಬಗ್ಗೆ ನಿರಂತರವಾಗಿ ಗ್ರಾಮ ಸಭೆಗಳ ಮೂಲಕ ಜನಸಾಮಾನ್ಯರಿಗೆ ಅರಿವು ಮೂಡಿಸುವಂತೆ ರಾಜ್ಯ ಸರ್ಕಾರಗಳಿಗೆ ಸೂಚಿಸಿರುತ್ತದೆ. ಈ ಅಭಿಯಾನಗಳನ್ನು ಅನುಷ್ಠಾನಗೊಳಿಸುತ್ತಿರುವ ಬಗ್ಗೆ ಕೇಂದ್ರ ಸರ್ಕಾರಕ್ಕೆ ಮೇಲೆ ತಿಳಿಸಿರುವಂತೆ ಆನ್‌ಲೈನ್ ಮುಖಾಂತರ ಮಾಹಿತಿಯನ್ನು ಸಲ್ಲಿಸುವಂತೆ ಸೂಚಿಸಿದೆ.

(ಎಸ್.ಎ.ಅಶ್ರಫುಲ್ ಹಸನ್)
ನಿರ್ದೇಶಕರು (ಪಂ.ರಾಜ್-1) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಗೆ:</u>

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ರೈತಭವನ, ಜನರಲ್ ಕಾರಿಯಪ್ಪ ವೃತ್ತ, ಗದಗ.
3) ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಲಲಿತಮಹಲ್ ರಸ್ತೆ, ಮೈಸೂರು.
4) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
5) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

<u>ಪ್ರತಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ.
3) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.